ತುರುವೇಕೆರೆ ತಾಲ್ಲೂಕಿನಲ್ಲಿ ಉಪನ್ಯಾಸಕರ ನೇಮಕಾತಿ.

1810 - ಶ್ರೀ ಹೆಚ್. ಬಿ. ನಂಜೇಗೌಡ (ತುರುವೇಕೆರೆ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕಿನಲ್ಲಿರುವ ಕಿರಿಯ ಕಾಲೇಜಿನಲ್ಲಿ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳು ಎಷ್ಟು? ಅವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಆ) ತುರುವೇಕೆರೆ ಟೌನ್ ಪ್ರಥಮ ದರ್ಜೆ ಕಾಲೇಜಿನಲ್ಲಿ ಖಾಲಿಯಿರುವ ಹುದ್ದೆಗಳು ಎಷ್ಟು? ಅವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ತುರುವೇಕೆರೆ ತಾಲ್ಲೂಕಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳು ಐದು. (ದಬ್ಬೇಗಟ್ಟ 3, ಮಾವಿನಕೆರೆ 2) ಈ ಹುದ್ದೆಗಳನ್ನು ಪ್ರಸಕ್ತ ಸಾಲಿನಲ್ಲಿ ತುಂಬಲಾಗುವುದು.

ಆ) ತುರುವೇಕೆರೆ ಟೌನ್‌ನಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಎರಡು ಉಪನ್ಯಾಸಕರ ಹುದ್ದೆಗಳು ಖಾಲಿ ಇವೆ. ಈ ಖಾಲಿ ಹುದ್ದೆಗಳನ್ನು ಶೀಘ್ರದಲ್ಲಿಯೇ ಭರ್ತಿ ಮಾಡಲಾಗುವುದು.

ತುರುವೇಕೆರೆ ತಾಲ್ಲೂಕಿನ ಮೈಸೂರು ಸಿಮೆಂಟ್ ಕಾರ್ಖಾನೆಯ ಪರಿಸರ ಮಾಲಿನ್ಯ ತಡೆಗಟ್ಟುವಿಕೆ.

1811 - ಶ್ರೀ ಹೆಚ್. ಬಿ. ನಂಜೇಗೌಡ (ತುರುವೇಕೆರೆ) : ಮಾನ್ಯ ಪರಿಸರ ಜೀವಿಶಾಸ್ತ್ರ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಅಸಂಪ್ರದಾಯಕ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕಿನಲ್ಲಿರುವ ಮೈಸೂರು ಸಿಮೆಂಟ್ ಕಾರ್ಖಾನೆ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳ ಗ್ರಾಮಸ್ಥರಿಂದ ಪರಿಸರ ಮಾಲಿನ್ಯದ ಬಗ್ಗೆ ಸರ್ಕಾರಕ್ಕೆ ದೂರುಗಳು ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಮಾಲಿನ್ಯವನ್ನು ತಡೆಗಟ್ಟಲು ಸರ್ಕಾರವು ತೆಗೆದುಕೊಂಡ ಕ್ರಮವೇನು?

ಶ್ರೀ ಬಸವರಾಜ್ ನೀ. ಶಿವಣ್ಣನವರ್ (ಪರಿಸರ, ಜೀವಿಶಾಸ್ತ್ರ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಅಸಂಪ್ರದಾಯಕ ಇಂಧನ ರಾಜ್ಯ ಸಚಿವರು) :

ಅ) ಹಿಂದೆ ದೂರುಗಳು ಬಂದಿದ್ದು.1993ರ ತರುವಾಯ ದೂರುಗಳು ಸ್ವೀಕೃತವಾಗಿರುವುದಿಲ್ಲ.

ಆ) ಕಾರ್ಖಾನೆಯ ಎಲ್ಲಾ ವಾಯು ಮಾಲಿನ್ಯ ಉಗಮಗಳಿಗೆ ಚಿಮಣಿಗಳ ಎತ್ತರವನ್ನು ಹಾಗೂ ನಿಯಂತ್ರದ ಉಪಕರಣಗಳಾದ ಬ್ಯಾಗ್ ಫಿಲ್ಟರ್‌ಗಳನ್ನು ಹಾಗೂ ಇ.ಎಸ್.ಪಿ.ಗಳನ್ನು